# All India Radio: Bangalore
## Regional Bulletin In Kannada
## 14.02.2026 / 2.30 p.m.
### ಆಕಾಶವಾಣಿ ಬೆಂಗಳೂರು
### ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ಒಂದು ಸಾವಿರ ದಿನ ಪೂರೈಸಿದ ರಾಜ್ಯ ಕಾಂಗ್ರೆಸ್ ಸರ್ಕಾರ ; ಹಾವೇರಿಯಲ್ಲಿ ಸಾಧನಾ ಸಮಾವೇಶ
2. ರಾಜ್ಯ ಕೃಷಿ ಸಚಿವರ ಮನವಿಗೆ ಕೇಂದ್ರ ಕೃಷಿ ಇಲಾಖೆಯಿಂದ ಸಕಾರಾತ್ಮಕ ಸ್ಪಂದನೆ ; ೨೨ ಸಾವಿರಕ್ಕೂ ಹೆಚ್ಚು ರೈತರಿಗೆ ಪಿಎಂ-ಕಿಸಾನ್ ಹಣ ಬಿಡುಗಡೆಯ ಭರವಸೆ
3. ಹಂಪಿ ಉತ್ಸವದ ಭಾಗವಾಗಿ ಗಾಳಿಪಟ ಉತ್ಸವಕ್ಕೆ ಶಾಸಕ ಹೆಚ್.ಆರ್.ಗವಿಯಪ್ಪ ಚಾಲನೆ
4. ಇದೇ ೧೬ರಿಂದ ಮೈಸೂರಿನಲ್ಲಿ ೩೮ನೇ ಅಖಿಲ ಭಾರತ ಅಂಚೆ ಸಾಂಸ್ಕೃತಿಕ ಸಮಾರಂಭ
5. ಸ್ವಚ್ಛ ಭಾರತ್ ಆಂದೋಲನ ಅಂಗವಾಗಿ ಬಳ್ಳಾರಿಯಲ್ಲಿ ೬ ಕಿಲೋಮೀಟರ್ ಮ್ಯಾರಥಾನ್ ಆಯೋಜನೆ

<><><><>

ಹಾವೇರಿಯಲ್ಲಿಂದು ಪ್ರಸ್ತುತ ಕಾಂಗ್ರೆಸ್ ಸರ್ಕಾರ ಒಂದು ಸಾವಿರ ದಿನಗಳನ್ನು ಪೂರೈಸಿರುವ ಹಿನ್ನೆಲೆಯಲ್ಲಿ ಸಾಧನಾ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ. ಈ ಸಂದರ್ಭದಲ್ಲಿ ಒಂದು ಲಕ್ಷ ಕುಟುಂಬಗಳಿಗೆ ಹಕ್ಕುಪತ್ರ ವಿತರಿಸುವ ಕಾರ್ಯಕ್ರಮವಿದೆ. ಕಾರ್ಯಕ್ರಮದಲ್ಲಿ ಪ್ರಸ್ತಾವಿಕ ಭಾಷಣ ಮಾಡಿದ ಕಂದಾಯ ಸಚಿವ ಕೃಷ್ಣ ಬೈರೇಗೌಡ, ೧ ಸಾವಿರ ದಿನಗಳ ಸಾರ್ಥಕ ಸೇವೆಯ ಸಮರ್ಪಣಾ ಕಾರ್ಯಕ್ರಮ ಇದಾಗಿದೆ. ಅಧಿಕೃತ ನೆಲೆಯಿಲ್ಲದೇ ಜೀವನ ನಡೆಸುತ್ತಿದ್ದ ಜನರ ಮನೆಗಳಿಗೆ ಅಗತ್ಯ ದಾಖಲೆ, ಹಕ್ಕುಪತ್ರ, ಇ-ಖಾತಾ ಮಾಡಿಕೊಟ್ಟು ನೆಮ್ಮದಿಯ ಬದುಕು ನಡೆಸಲು ಭೂ-ಖಾತರಿ ನೀಡುವ ಸಮರ್ಪಣಾ ಕಾರ್ಯಕ್ರಮ ಇದಾಗಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಡಾ.ಜಿ.ಪರಮೇಶ್ವರ್, ಎಂ.ಬಿ.ಪಾಟೀಲ್, ಎಚ್.ಕೆ.ಪಾಟೀಲ್, ಶಿವರಾಜ್ ತಂಗಡಗಿ ಸೇರಿದಂತೆ ಶಾಸಕರು, ಮುಖಂಡರು ಹಾಗೂ ಅನೇಕ ಗಣ್ಯರು ಪಾಲ್ಗೊಂಡಿದ್ದಾರೆ.

<><><><>

ಕಾಂಗ್ರೆಸ್ ನೇತೃತ್ವದಲ್ಲಿನ ರಾಜ್ಯ ಸರ್ಕಾರದ ೧ ಸಾವಿರ ದಿನಗಳ ಆಡಳಿತ ಬಡವರು ಮತ್ತು ಹಿಂದುಳಿದ ವರ್ಗಗಳ ಸಾಮಾಜಿಕ ಹಾಗೂ ಆರ್ಥಿಕ ಸಬಲೀಕರಣದಲ್ಲಿ ಮಹತ್ವದ ಮೈಲಿಗಲ್ಲು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಸಾಧನಾ ಸಮಾವೇಶದಲ್ಲಿ ಪಾಲ್ಗೊಳ್ಳಲು ಹಾವೇರಿಗೆ ಇಂದು ಆಗಮಿಸಿ ಸರ್ಕಾರಿ ಮೆಡಿಕಲ್ ಕಾಲೇಜಿನ ಹೆಲಿಪ್ಯಾಡ್‌ನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪ್ರಸ್ತುತ ಕಾಂಗ್ರೆಸ್ ಸರ್ಕಾರ ಈಗಾಗಲೇ ೫೯೨ ಭರವಸೆಗಳ ಪೈಕಿ ೨೪೩ ಯೋಜನೆಗಳನ್ನು ಅನುಷ್ಠಾನಗೊಳಿಸಿದ್ದು, ನುಡಿದಂತೆ ನಡೆಯುತ್ತಿದೆ ಎಂದರು. ವರದಾ-ಬೆಣ್ಣೆಹಳ್ಳಿ ಯೋಜನೆಯ ಸಮಗ್ರ ಯೋಜನಾ ವರದಿ-ಡಿಪಿಆರ್ ಅನ್ನು ಈಗಾಗಲೇ ಕೇಂದ್ರಕ್ಕೆ ಸಲ್ಲಿಸಲಾಗಿದೆ. ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವರದಿ ಮುಂದಿನ ತಿಂಗಳೊಳಗೆ ಕೈ ಸೇರಲಿದ್ದು, ಅದರ ಆಧಾರದ ಮೇಲೆ ಸರ್ಕಾರ ಮುಂದಿನ ಕ್ರಮ ಕೈಗೊಳ್ಳಲಿದೆ ಎಂದು ಮಾಹಿತಿ ನೀಡಿದರು.

<><><><>

ರಾಜ್ಯದ ಸಾವಿರಾರು ರೈತರಿಗೆ ಪಿಎಂ-ಕಿಸಾನ್ ಯೋಜನೆಯಡಿ ಬಾಕಿ ಉಳಿದಿದ್ದ ಹಣವನ್ನು ಬಿಡುಗಡೆ ಮಾಡುವಂತೆ ಕೃಷಿ ಸಚಿವ ಚಲುವರಾಯಸ್ವಾಮಿ ಸಲ್ಲಿಸಿದ್ದ ಮನವಿಗೆ ಕೇಂದ್ರ ಸರ್ಕಾರ ಸಕಾರಾತ್ಮಕವಾಗಿ ಸ್ಪಂದಿಸಿದೆ. ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ೨೦೨೫ರ ಡಿಸೆಂಬರ್ ೧೬ರಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಪತ್ರ ಬರೆದು, ತಾಂತ್ರಿಕ ಕಾರಣಗಳಿಂದ ರಾಜ್ಯದ ಸುಮಾರು ೩೦ ಸಾವಿರಕ್ಕೂ ಹೆಚ್ಚು ಅರ್ಹ ರೈತರು ಯೋಜನೆಯ ಲಾಭದಿಂದ ವಂಚಿತರಾಗುತ್ತಿರುವುದನ್ನು ಗಮನಕ್ಕೆ ತಂದಿದ್ದರು. ಕಳೆದ ವಾರ ನಡೆದ ಅಂತಾರಾಷ್ಟ್ರೀಯ ವಾಣಿಜ್ಯ ಮೇಳಕ್ಕೆ ಕೇಂದ್ರ ಸಚಿವರು ಆಗಮಿಸಿದ್ದ ಸಂದರ್ಭದಲ್ಲಿಯೂ ಈ ವಿಚಾರ ಪ್ರಸ್ತಾಪಿಸಿ, ಮನವಿ ಮಾಡಿದ್ದರು. ಇದಕ್ಕೆ ಪೂರಕವಾಗಿ ಸ್ಪಂದಿಸಿರುವ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್, ರಾಜ್ಯ ಸರ್ಕಾರ ನೀಡಿರುವ ದೃಢೀಕರಣದ ಆಧಾರದ ಮೇಲೆ ಈಗಾಗಲೇ ೨೨ ಸಾವಿರಕ್ಕೂ ಹೆಚ್ಚು ಫಲಾನುಭವಿಗಳನ್ನು ೨೨ನೇ ಕಂತಿನ ಪಾವತಿ ಪಟ್ಟಿಯಲ್ಲಿ ಸೇರಿಸಲಾಗಿದ್ದು, ಶೀಘ್ರದಲ್ಲೇ ಅವರಿಗೆ ಹಣ ಬಿಡುಗಡೆಯಾಗಲಿದೆ ಎಂದು ತಿಳಿಸಿದ್ದಾರೆ. ಉಳಿದ ಪ್ರಕರಣಗಳನ್ನು ರಾಜ್ಯ ಅಧಿಕಾರಿಗಳು ಪರಿಶೀಲಿಸಿ

ದೃಢೀಕರಿಸಿದ ಕೂಡಲೇ ಅವರನ್ನೂ ಯೋಜನೆಯಡಿ ಸೇರ್ಪಡೆಗೊಳಿಸಲಾಗುವುದು ಎಂದು ಚೌಹಾಣ್ ಅವರು ತಮ್ಮ ಪತ್ರದಲ್ಲಿ ಭರವಸೆ ನೀಡಿದ್ದಾರೆ. ಈ ಬೆಳವಣಿಗೆಯ ಕುರಿತು ಪ್ರತಿಕ್ರಿಯಿಸಿರುವ ಸಚಿವ ಎನ್. ಚಲುವರಾಯಸ್ವಾಮಿ ಅವರು, 'ರಾಜ್ಯದ ರೈತರ ಹಿತದೃಷ್ಟಿಯೊಂದಿಗೆ ಸಲ್ಲಿಸಿದ ಮನವಿಯನ್ನು ಪುರಸ್ಕರಿಸಿ, ತಾಂತ್ರಿಕ ಅಡೆತಡೆಗಳನ್ನು ನಿವಾರಿಸಿ ರೈತರಿಗೆ ನ್ಯಾಯ ಒದಗಿಸಿದ ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ರಾಜ್ಯ ಸರ್ಕಾರದ ಪರವಾಗಿ ಧನ್ಯವಾದಗಳನ್ನು ಅರ್ಪಿಸಿದ್ದಾರೆ.

<><><><>

ವಿಜಯನಗರದ ವೈಭವವನ್ನು ಸಾರುವ 'ಹಂಪಿ ಉತ್ಸವ - ೨೦೧೯'ರ ಅಂಗವಾಗಿ ಹೊಸಪೇಟೆ ನಗರದ ವಿಜಯನಗರ ಕಾಲೇಜು ಮೈದಾನದಲ್ಲಿ ಇಂದು ಬೆಳಿಗ್ಗೆ ಗಾಳಿಪಟ ಉತ್ಸವಕ್ಕೆ ಶಾಸಕ ಹೆಚ್.ಆರ್.ಗವಿಯಪ್ಪ ಚಾಲನೆ ನೀಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಜಿಲ್ಲಾ ಆಡಳಿತದ ಜಂಟಿ ಆಶ್ರಯದಲ್ಲಿ ಆಯೋಜಿಸಲಾಗಿದ್ದ ಈ ಕಾರ್ಯಕ್ರಮವು ನೋಡುಗರ ಕಣ್ಮನ ಸೆಳೆಯುತ್ತಿದೆ. ಮುಂಜಾನೆಯಿಂದಲೇ ಮೈದಾನದಲ್ಲಿ ನೂರಾರು ಗಾಳಿಪಟ ಪ್ರೇಮಿಗಳು ಸೇರಿ, ಆಕಾಶದಲ್ಲಿ ವಿವಿಧ ವಿನ್ಯಾಸ ಹಾಗೂ ಬಣ್ಣ ಬಣ್ಣದ ಗಾಳಿಪಟಗಳನ್ನು ಹಾರಿಸಿ, ಸಂಭ್ರಮಿಸಿದರು.

<><><><>

೩೮ನೇ ಅಖಿಲ ಭಾರತ ಅಂಚೆ ಸಾಂಸ್ಕೃತಿಕ ಸಮಾರಂಭ-೨೦೧೯ ಅನ್ನು ಇದೇ ೧೯ರಿಂದ ಮೈಸೂರಿನಲ್ಲಿ ಆಯೋಜಿಸಲಾಗುತ್ತಿದೆ ಎಂದು ಅಂಚೆ ಇಲಾಖೆ, ಮೈಸೂರು ವೃತ್ತದ ಸ್ಥಾನಿಕ ನಿರ್ದೇಶಕ ಸಂದೇಶ್ ಮಹಾದೇವಪ್ಪ ತಿಳಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಇಂದು ಮಾಹಿತಿ ನೀಡಿದ ಅವರು, ಕರ್ನಾಟಕ ಅಂಚೆ ವೃತ್ತವು ಇದೇ ೧೯ ರಿಂದ ೨೦ರವರೆಗೆ ಮೈಸೂರಿನಲ್ಲಿರುವ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ಆವರಣದಲ್ಲಿ ೩೮ನೇ ಅಖಿಲ ಭಾರತ ಅಂಚೆ ಸಾಂಸ್ಕೃತಿಕ ಸಮಾರಂಭ-೨೦೧೯ರನ್ನು ಆಯೋಜಿಸುತ್ತಿದೆ ಎಂದರು. ಈ ರಾಷ್ಟ್ರೀಯ ಮಟ್ಟದ ಸಾಂಸ್ಕೃತಿಕ ಕಾರ್ಯಕ್ರಮವು ದೇಶದಾದ್ಯಂತ ಅಂಚೆ ನೌಕರರ ನಡುವೆ ಸ್ನೇಹಭಾವ, ಏಕತೆ ಹಾಗೂ ಒಗ್ಗಟ್ಟಿನ ಮನೋಭಾವ ಬೆಳೆಸುವ ಗುರಿಯನ್ನು ಹೊಂದಿದೆ. ದೇಶದ ವಿವಿಧ ಭಾಗಗಳಿಂದ ೨೧ ಅಂಚೆ ವೃತ್ತಗಳನ್ನು ಪ್ರತಿನಿಧಿಸುವ ಒಟ್ಟು ೩೩೫ ಸಿಬ್ಬಂದಿ ಮತ್ತು ಅವರ ಮಕ್ಕಳು ಈ ಐದು ದಿನಗಳ ಸಾಂಸ್ಕೃತಿಕ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ ಎಂದರು. ವಿವಿಧ ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗುತ್ತಿದ್ದು ೨೧ ರಾಜ್ಯಗಳಿಂದ ೩೨ ವಿಭಾಗಗಳಲ್ಲಿ ಶಾಸ್ತ್ರೀಯ ಸಂಗೀತ ಗಾಯನ, ಭರತನಾಟ್ಯ, ಕೂಚುಪುಡಿ, ಕಿರುನಾಟಕ ಕಾರ್ಯಕ್ರಮಗಳು ಜರುಗಲಿವೆ. ೨೦ ವರ್ಷದ ನಂತರ ಈ ಕಾರ್ಯಕ್ರಮ ಮೈಸೂರಿನಲ್ಲಿ ನಡೆಯುತ್ತಿದೆ.

<><><><>

ಬಳ್ಳಾರಿಯಲ್ಲಿ ಇಂದು ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ ಮತ್ತು ಮಹಾನಗರ ಪಾಲಿಕೆಯಿಂದ ಸುಸ್ಥಿರ ಸ್ವಚ್ಛ ಭಾರತ ಆಂದೋಲನದ ಅಂಗವಾಗಿ ಆರು ಕಿಲೋ ಮೀಟರ್ ಮ್ಯಾರಥಾನ್ ಹಮ್ಮಿಕೊಳ್ಳಲಾಗಿತ್ತು. ಮುನಿಸಿಪಲ್ ಮೈದಾನದಲ್ಲಿ ಮ್ಯಾರಥಾನ್‌ಗೆ ಜಿಲ್ಲಾಧಿಕಾರಿ ಕೆ.ನಾಗೇಂದ್ರ ಪ್ರಸಾದ್, ಮೇಯರ್ ಪಿ.ಗಾದೆಪ್ಪ, ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ, ಪಾಲಿಕೆ ಸದಸ್ಯರು ಹಸಿರು ನಿಶಾನೆ ತೋರಿದರು. ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ಕೆ.ನಾಗೇಂದ್ರ ಪ್ರಸಾದ್, ಸ್ವಚ್ಛಭಾರತ್ ಮಿಷನ್ ಯೋಜನೆಯು ಮೊದಲಿಗೆ ಬಹಿರ್ದೆಸೆ ಶೌಚ ಮುಕ್ತ ಭಾರತವನ್ನಾಗಿ ಮಾಡಿದೆ. ಎರಡನೇ ಹಂತದಲ್ಲಿ ಸುಸ್ಥಿರ ಸ್ವಚ್ಛತೆಗೆ ಆದ್ಯತೆ ನೀಡುತ್ತಿದೆ. ಇದರಲ್ಲಿ ಘನತ್ಯಾಜ್ಯ ವಿಲೇವಾರಿ ಮತ್ತು ಸಂಸ್ಕರಣೆ ವೈಜ್ಞಾನಿಕವಾಗಿ ಮಾಡಬೇಕಿದೆ. ಇದೆಲ್ಲದಕ್ಕೆ ಸಾರ್ವಜನಿಕರ ಸಹಕಾರ ಅತ್ಯಗತ್ಯ ಎಂದರು.

ಆರು ಕಿಲೋ ಮೀಟರ್ ಓಟದಲ್ಲಿ ನೂರಾರು ಮಕ್ಕಳು, ಪಾಲಕರು, ಸಾರ್ವಜನಿಕರು, ವಿವಿಧ ಸಂಘ ಸಂಸ್ಥೆಗಳ ಪ್ರತಿನಿದಿಗಳು ಪಾಲ್ಗೊಂಡಿದ್ದರು. ಆಕಾಶವಾಣಿಯೊಂದಿಗೆ ಮಾತನಾಡಿದ ಓಟದಲ್ಲಿ ಪ್ರಥಮ ಸ್ಥಾನ ಪಡೆದ ಬಳ್ಳಾರಿ ತಾಲೂಕಿನ ಕುಡುತಿನಿ ಪಟ್ಟಣದ ಆನಂದ್, ಪ್ರತಿ ಹಳ್ಳಿಯೂ ಸ್ವಚ್ಛತೆಯಿಂದ ಇದ್ದರೆ ಎಲ್ಲರ ಆರೋಗ್ಯವೂ ಉತ್ತಮವಾಗಿರುತ್ತದೆ ಎಂದರು.

<><><><>

ಕೋಲಾರ ಜಿಲ್ಲೆ ಮಾಲೂರು ತಾಲ್ಲೂಕಿನಲ್ಲಿ ಜಲ್ಲಿ ಕ್ರಷರ್‌ಗಳು ವ್ಯಾಪಕ ಪ್ರಮಾಣದಲ್ಲಿದ್ದು ಆಗಾಗ ನಡೆಯುವ ದುರಂತಗಳಿಂದು ಕಾರ್ಮಿಕರು ಅಪಾಯ ಮತ್ತು ಸಾವಿಗೆ ತುತ್ತಾಗುತ್ತಿರುವ ಹಿನ್ನೆಲೆ ಪ್ರತಿಯೊಬ್ಬ ಕಾರ್ಮಿಕರಿಗೂ ಕ್ರಷರ್ ಮಾಲೀಕರು ಕಡ್ಡಾಯವಾಗಿ ವಿಮಾ ಸೌಲಭ್ಯ ಕಲ್ಪಿಸಬೇಕು ಎಂದು ಉಪಲೋಕಾಯುಕ್ತ ಬಿ.ವೀರಪ್ಪ

ಸೂಚಿಸಿದರು. ಮಾಲೂರಿನಲ್ಲಿ ನಿನ್ನೆ ಸಾರ್ವಜನಿಕ ಕುಂದು ಕೊರತೆ ಸಭೆ ನಡೆಸಿದ ಅವರು ಕೆಲ ತಿಂಗಳ ಹಿಂದೆ ನಡೆದಿದ್ದ ಕ್ರಷರ್ ದುರಂತದಲ್ಲಿ ಸಾವಿಗೀಡಾಗಿದ್ದ ಕಾರ್ಮಿಕರ ಕುಟುಂಬಕ್ಕೆ ಮಾಲೀಕರು ಯಾವುದೇ ಪರಿಹಾರ ಕೊಡದೆ  ಇದ್ದಾಗ ಲೋಕಾಯುಕ್ತ ಸಂಸ್ಥೆಯಿಂದ ೧೫ ಲಕ್ಷ ರೂಪಾಯಿ ಪರಿಹಾರ ಕೊಡಿಸಿದ್ದನ್ನು ಸ್ಮರಿಸಿದರು.

<><><><>

ಕರ್ನಾಟಕ ರಾಜ್ಯ ಕೃಷಿ ಉತ್ಪನ್ನಗಳ ಸಂಸ್ಕರಣೆ ಹಾಗೂ ರಫ್ತು, ನಿಗಮ ನಿಯಮಿತ ಸಂಸ್ಥೆ ವತಿಯಿಂದ ಇದೇ ೧೭ರಂದು ಚಿಕ್ಕಮಗಳೂರಿನ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ "ಕಾಳುಮೆಣಸು ಮತ್ತಿತರೆ ಸಾಂಬಾರು ಉತ್ಪನ್ನಗಳ ಸಂಸ್ಕರಣೆ, ಮೌಲ್ಯವರ್ಧನೆ ಹಾಗೂ ರಫ್ತು,' ಕುರಿತು ಒಂದು ದಿನದ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಸಾಂಬಾರು ಬೆಳೆಗಾರರು ರೈತ ಉತ್ಪಾದಕ ಸಂಸ್ಥೆಗಳು, ಸಾಂಬಾರು ಉತ್ಪನ್ನಗಳ ಉದ್ದಿಮೆದಾರರಿಗೆ ಸದರಿ ತರಬೇತಿ ಕಾರ್ಯಕ್ರಮವು ಉಪಯುಕ್ತವಾಗಿರಲಿದೆ ಎಂದು ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><><><>

ಉತ್ತರ ಕನ್ನಡ ಜಿಲ್ಲೆಯಲ್ಲಿ ಇಂದು ಮತ್ತು ನಾಳೆ ತೀವ್ರ ಶಾಖದ ಅಲೆಯ ವಾತಾವರಣ ಇರುವುದಾಗಿ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದ್ದು, ಸಾರ್ವಜನಿಕರು ಎಚ್ಚರವಹಿಸುವಂತೆ ಜಿಲ್ಲಾಧಿಕಾರಿ ಹಾಗೂ ವಿಪತ್ತು ನಿರ್ವಹಣಾ ಘಟಕದ ಅಧ್ಯಕ್ಷೆ ಕೆ.ಲಕ್ಷ್ಮಿಪ್ರಿಯ ತಿಳಿಸಿದ್ದಾರೆ. ಸಾರ್ವಜನಿಕರಿಗೆ ಉತ್ತರಕನ್ನಡ ಜಿಲ್ಲಾಡಳಿತ ಹಾಗೂ ವಿಪತ್ತು ನಿರ್ವಹಣಾ ಘಟಕದಿಂದ ಹಲವು ಮುನ್ನೆಚ್ಚರಿಕೆ ಕ್ರಮ ಜಾರಿ ಮಾಡಲಾಗಿದ್ದು, ದಿನಪೂರ್ತಿ ಸಾಕಷ್ಟು ನೀರು ಕುಡಿಯಬೇಕು. ಓ.ಆರ್.ಎಸ್, ನಿಂಬೆ ನೀರು, ಮಜ್ಜಿಗೆ, ಎಳನೀರು ಮುಂತಾದ ದ್ರವ ವಸ್ತುಗಳನ್ನು ಸೇವಿಸಬೇಕು. ಹಗುರವಾದ, ತೆಳುವಾದ ಬಣ್ಣದ ಮತ್ತು ಸಡಿಲವಾದ ಹತ್ತಿ ಬಟ್ಟೆಗಳನ್ನು ಧರಿಸಬೇಕು. ದೇಹದಲ್ಲಿ ತಲೆಸುತ್ತು, ಅತಿಯಾದ ದೌರ್ಬಲ್ಯ, ವಾಂತಿ, ಜ್ವರದ ಲಕ್ಷಣಗಳು ಕಂಡುಬಂದಲ್ಲಿ ತಕ್ಷಣ ವೈದ್ಯರನ್ನು ಸಂಪರ್ಕಿಸುವಂತೆ ತಿಳಿಸಲಾಗಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>